ಸಂಪುಟ 01 | ಸಂಚಿಕೆ 195 | ಗುರುವಾರ 11 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಪಂಡಿತ್ ರಾಮ್ ಪ್ರಸಾದ್ ಬಿಸ್ಮಿಲ್ ಜಯಂತಿ**

ಭಾರತದ ಸ್ವಾತಂತ್ರ್ಯ ಸಂಗ್ರಾಮದ ಪ್ರಮುಖ ಕ್ರಾಂತಿಕಾರಿ ಹಾಗೂ 'ಸರ್ಫರೋಶೀ ಕೀ ತಮನ್ನಾ' ಎಂಬ ಕವಿತೆಯ ಮೂಲಕ ದೇಶದ ಯುವಕರಲ್ಲಿ ದೇಶಭಕ್ತಿಯ ಕಿಚ್ಚು ಹೊತ್ತಿಸಿದ ಪಂಡಿತ್ ರಾಮ್ ಪ್ರಸಾದ್ ಬಿಸ್ಮಿಲ್ ಅವರ ಜನ್ಮದಿನವನ್ನು ಪ್ರತಿ ವರ್ಷ ಜೂನ್ 11 ರಂದು ಆಚರಿಸಲಾಗುತ್ತದೆ.

**2) ಅಂತರರಾಷ್ಟ್ರೀಯ ಆಟದ ದಿನ**

ವಿಶ್ವಸಂಸ್ಥೆಯು ಪ್ರತಿ ವರ್ಷ ಜೂನ್ 11 ರಂದು ಅಂತರರಾಷ್ಟ್ರೀಯ ಆಟದ ದಿನವನ್ನು (International Day of Play) ಅಧಿಕೃತವಾಗಿ ಆಚರಿಸುತ್ತದೆ. ಮಕ್ಕಳ ಆಟದ ಹಕ್ಕನ್ನು ಎತ್ತಿಹಿಡಿಯಲು ಮತ್ತು ಆಟದ ಮೂಲಕ ಅವರ ಸರ್ವತೋಮುಖ ಬೆಳವಣಿಗೆಯನ್ನು ಉತ್ತೇಜಿಸಲು ಈ ದಿನವನ್ನು ಜಾಗತಿಕವಾಗಿ ಆಚರಿಸಲಾಗುತ್ತದೆ

**3) ಪಂಚಾಕ್ಷರಿ ಗವಾಯಿ ಅವರ ಪುಣ್ಯಸ್ಮರಣೆ**

ಗಾನಯೋಗಿ ಪಂಡಿತ್ ಪಂಚಾಕ್ಷರಿ ಗವಾಯಿ ಅವರು ಭಾರತದ ಶ್ರೇಷ್ಠ ಹಿಂದೂಸ್ತಾನಿ ಗಾಯಕರು ಹಾಗೂ ಗದುಗಿನ ಪ್ರಸಿದ್ಧ ಶ್ರೀ ವೀರೇಶ್ವರ ಪುಣ್ಯಾಶ್ರಮದ ಸಂಸ್ಥಾಪಕರು. ಇವರ ಪುಣ್ಯಸ್ಮರಣೆಯನ್ನು ಪ್ರತಿ ವರ್ಷ ಜೂನ್ 11 ರಂದು ಆಚರಿಸಲಾಗುತ್ತದೆ. ಸಂಗೀತ ಲೋಕಕ್ಕೆ ಮತ್ತು ಅಂಧ ಮಕ್ಕಳ ಉದ್ಧಾರಕ್ಕೆ ಅವರು ನೀಡಿದ ಕೊಡುಗೆ ಅಪಾರ.

## ಸುಭಾಷಿತ

ಸತ್ಯಕ್ಕಾಗಿ ಏನನ್ನಾದರೂ ತ್ಯಾಗ ಮಾಡಿ.
ಆದರೆ,ಸತ್ಯವನ್ನು ಮಾತ್ರ ತ್ಯಾಗ ಮಾಡಬೇಡಿ.

-ಸ್ವಾಮಿ ವಿವೇಕಾನಂದ

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಸನ್ ರೈಸ್ ಡಿ-ಫಾರ್ಮಸಿ ಕಾಲೇಜು ಸಿಂಧನೂರು: ಹೆಮ್ಮೆಯ ಸಾಧನೆ

## ಫಾರ್ಮಸಿ ದ್ವಿತೀಯ ವರ್ಷದ ವಿದ್ಯಾರ್ಥಿಗಳ ನೂರಕ್ಕೆ ನೂರರಷ್ಟು ಫಲಿತಾಂಶ

❑ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ಕರ್ನಾಟಕ ರಾಜ್ಯ ಫಾರ್ಮಸಿ ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ವತಿಯಿಂದ 2026ರ ಮಾರ್ಚ್ ತಿಂಗಳಲ್ಲಿ ನಡೆಸಲಾದ ಡಿ-ಫಾರ್ಮಸಿ ದ್ವಿತೀಯ ವರ್ಷದ ಪರೀಕ್ಷೆಗಳಲ್ಲಿ ಸಿಂಧನೂರಿನ ಸನ್ ರೈಸ್ ಡಿ-ಫಾರ್ಮಸಿ ಕಾಲೇಜು ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ ನೂರಕ್ಕೆ ನೂರರಷ್ಟು ಫಲಿತಾಂಶ ದಾಖಲಿಸುವ ಮೂಲಕ ಕಾಲೇಜಿಗೆ ಹಾಗೂ ಸಿಂಧನೂರು ನಗರಕ್ಕೆ ಹೆಮ್ಮೆಯ ಕೀರ್ತಿಯನ್ನು ತಂದಿದ್ದಾರೆ.

ಕಾಲೇಜಿನ ಎಲ್ಲಾ 60 ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದು ವಿಶೇಷವಾಗಿದ್ದು, ಹಲವರು ಪ್ರಥಮ ದರ್ಜೆ, ದ್ವಿತೀಯ ದರ್ಜೆ ಹಾಗೂ ತೃತೀಯ ದರ್ಜೆಗಳಲ್ಲಿ ಉತ್ತೀರ್ಣರಾಗಿ ಕಾಲೇಜಿನ ಶೈಕ್ಷಣಿಕ ಗುಣಮಟ್ಟವನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.ವಿದ್ಯಾರ್ಥಿಗಳ ಈ ಸಾಧನೆಯು ಕಾಲೇಜಿನ ಶಿಕ್ಷಣದ ಗುಣಮಟ್ಟ, ಉಪನ್ಯಾಸಕರ ಮಾರ್ಗದರ್ಶನ ಹಾಗೂ ವಿದ್ಯಾರ್ಥಿಗಳ ಪರಿಶ್ರಮಕ್ಕೆ ಸಾಕ್ಷಿಯಾಗಿದೆ.

ಪರೀಕ್ಷೆಯಲ್ಲಿ ತಸ್ಮಿಯಾ ತಹಸೀನ್ ಅವರು 1100 ಅಂಕಗಳಿಗೆ 906 ಅಂಕಗಳನ್ನು (82.3%) ಗಳಿಸುವ ಮೂಲಕ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ.ಸಾನಿಯಾ ಅತ್ತಾರ್ ಅವರು 869 ಅಂಕಗಳನ್ನು (79%) ಪಡೆದು ದ್ವಿತೀಯ ಸ್ಥಾನ ಗಳಿಸಿದ್ದು, ನಾಜ್ಮೀನ್ ಅವರು 862 ಅಂಕಗಳನ್ನು (78%) ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ. ಇನ್ನು ಅಮಿತ್ ರಾಯ್ ಅವರು 828 ಅಂಕಗಳನ್ನು (75%) ಪಡೆದು ನಾಲ್ಕನೇ ಸ್ಥಾನ,




ಅಯಾಜ್ ಅವರು 823 ಅಂಕಗಳನ್ನು (74%) ಗಳಿಸಿ ಐದನೇ ಸ್ಥಾನ ಹಾಗೂ ಪಾರ್ವತಿ ಅವರು 822 ಅಂಕಗಳನ್ನು (74%) ಪಡೆದು ಆರನೇ ಸ್ಥಾನವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಈ ವಿದ್ಯಾರ್ಥಿಗಳ ಸಾಧನೆಯು ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದು, ಕಾಲೇಜಿನ ಶೈಕ್ಷಣಿಕ ಸಾಧನೆಗೆ ಮತ್ತಷ್ಟು ಮೆರುಗು ತಂದಿದೆ.ವಿದ್ಯಾರ್ಥಿಗಳ ಈ ಅಭೂತಪೂರ್ವ ಸಾಧನೆ ಕುರಿತು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ. ಅವರು ಸಂತಸ ವ್ಯಕ್ತಪಡಿಸಿ, "ನಮ್ಮ ಕಾಲೇಜು ನೂರಕ್ಕೆ ನೂರರಷ್ಟು ಫಲಿತಾಂಶದೊಂದಿಗೆ ಅತ್ಯುತ್ತಮ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು ಹಾಗೂ ಕಾರ್ಯದರ್ಶಿಗಳಾದ ಇರ್ಷಾದ್ ಕೆ ಅವರು ಮಾತನಾಡಿ ವಿದ್ಯಾರ್ಥಿಗಳ ಪರಿಶ್ರಮ, ಉಪನ್ಯಾಸಕರ ಶ್ರದ್ಧೆ ಮತ್ತು ಪಾಲಕರ ಸಹಕಾರದ ಫಲವಾಗಿ ಈ ಯಶಸ್ಸು



"ಸನ್ ರೈಸ್ ಡಿ-ಫಾರ್ಮಸಿ ಕಾಲೇಜಿನ ವಿದ್ಯಾರ್ಥಿಗಳು ನೂರಕ್ಕೆ ನೂರರಷ್ಟು ಫಲಿತಾಂಶ ಸಾಧಿಸಿರುವುದು ಅತ್ಯಂತ ಸಂತಸದ ವಿಷಯವಾಗಿದೆ. ಈ ಯಶಸ್ಸಿಗೆ ಕಾರಣರಾದ ನಮ್ಮ ಫಾರ್ಮಸಿ ಪ್ರಾಚಾರ್ಯರಾದ ವಾಸಿಂ ಹುಸೇನ್ ಹಾಗೂ ಉಪನ್ಯಾಸಕರಾದ ಚಕ್ರವರ್ತಿ,ದಿಲೀಪ್, ಸಾಗರ್, ಹರ್ಷಿತ, ಹಾಗೂ ವಿದ್ಯಾರ್ಥಿಗಳು,ಪಾಲಕರಿಗೆ ಹೃತ್ಪೂರ್ವಕ ಅಭಿನಂದನೆಗಳು. ವಿದ್ಯಾರ್ಥಿಗಳ ಪರಿಶ್ರಮ ಮತ್ತು ಉಪನ್ಯಾಸಕರ ಸಮರ್ಪಿತ ಮಾರ್ಗದರ್ಶನದಿಂದ ನಮ್ಮ ಸನ್ ರೈಸ್ ಡಿ ಫಾರ್ಮಸಿ ಕಾಲೇಜಿಗೆ ಹಾಗೂ ಸಿಂಧನೂರು ನಗರಕ್ಕೆ ಕೀರ್ತಿ ಬಂದಿದೆ. ಮುಂದಿನ ದಿನಗಳಲ್ಲಿಯೂ ಇದೇ ರೀತಿ ಇನ್ನಷ್ಟು ಸಾಧನೆಗಳು ಮೂಡಿಬರಲಿ"ಎಂದು ಆಶಿಸುತ್ತೇನೆ.

**ಇರ್ಫಾನ್.ಕೆ (ಅಧ್ಯಕ್ಷರು ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್, ಪ್ಯಾರಾ ಮೆಡಿಕಲ್ ಕಾಲೇಜು ಸಿಂಧನೂರು)**

ಸಾಧ್ಯವಾಗಿದೆ. ಈ ಸಾಧನೆಯು ಸನ್ ರೈಸ್ ಡಿ-ಫಾರ್ಮಸಿ ಕಾಲೇಜಿನ ಹೆಸರನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ದಿದ್ದು, ಸಿಂಧನೂರು ನಗರಕ್ಕೂ ಕೀರ್ತಿ ತಂದಿದೆ" ಎಂದು ಹೇಳಿದರು.

ಫಾರ್ಮಸಿ ಪ್ರಾಚಾರ್ಯರಾದ ವಾಸಿಮ ಹೂಸೇನ್ ಅವರು ಮಾತನಾಡಿ ನಮ್ಮ ಡಿ ಫಾರ್ಮಸಿ ಕಾಲೇಜಿಗೆ ನೂರಕ್ಕೆ ನೂರರಷ್ಟು ಫಲಿತಾಂಶ ಬಂದಿರುವುದು ತಮಗೆಲ್ಲರಿಗೂ ಸಂತಸ ತಂದಿದೆ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಅವರ ಸಹಕಾರದಿಂದ ಇಂದು ನಮ್ಮ ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡಿವೆ ಎಂದು ಅಭಿಪ್ರಾಯಪಟ್ಟರು ಹಾಗೂ ಅಧ್ಯಕ್ಷರಾದ ಇರ್ಫಾನ್ ಕೆ, ಕಾರ್ಯದರ್ಶಿಗಳಾದ, ಇರ್ಷಾದ್ ಕೆ, ಪ್ರಾಚಾರ್ಯರಾದ ವಾಸಿಂ ಹುಸೇನ್ ಅವರು ಹಾಗೂ ಎಲ್ಲಾ ಉಪನ್ಯಾಸಕರು ಸೇರಿ ಎಲ್ಲಾ ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ತಿಳಿಸಿ, ಅವರ ಮುಂದಿನ ಶೈಕ್ಷಣಿಕ ಹಾಗೂ ವೃತ್ತಿ ಜೀವನವು ಇನ್ನಷ್ಟು ಯಶಸ್ವಿಯಾಗಲಿ ಎಂದು ಹಾರೈಸಿದರು.ಈ ಸಾಧನೆಯ ಹಿಂದಿನ ಪ್ರಮುಖ ಶಕ್ತಿಯಾಗಿರುವ ಕಾಲೇಜಿನ ಪ್ರಾಂಶುಪಾಲರಾದ ವಾಸಿಂ ಹುಸೇನ್ ಅವರ ನಾಯಕತ್ವ ಹಾಗೂ ಉಪನ್ಯಾಸಕರಾದ ಚಕ್ರವರ್ತಿ, ಸಾಗರ್, ದಿಲೀಪ್ ಮತ್ತು ಹರ್ಷಿತಾ ಅವರ ನಿರಂತರ ಮಾರ್ಗದರ್ಶನವನ್ನು ಈ ಸಂದರ್ಭದಲ್ಲಿ ವಿಶೇಷವಾಗಿ ಸ್ಮರಿಸಲಾಯಿತು.ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿ, ಪರೀಕ್ಷಾ ಭಯವನ್ನು ದೂರ ಮಾಡಿ, ಸಮರ್ಪಕ ತರಬೇತಿ ಹಾಗೂ ಮಾರ್ಗದರ್ಶನ ನೀಡಿದ ಶಿಕ್ಷಕರ ಸೇವೆ ಶ್ಲಾಘನೀಯವಾಗಿದೆ ಎಂದು ಸಂಸ್ಥೆ ತಿಳಿಸಿದೆ. ಹಾಗೆಯೇ ವಿದ್ಯಾರ್ಥಿಗಳ ಯಶಸ್ಸಿಗೆ ಬೆನ್ನೆಲುಬಾಗಿ ನಿಂತ ಎಲ್ಲಾ ಪಾಲಕರಿಗೂ ಅಭಿನಂದನೆಗಳನ್ನು ಸಲ್ಲಿಸಲಾಗಿದ್ದು, ಅವರ ಪ್ರೋತ್ಸಾಹ ಮತ್ತು ಸಹಕಾರದಿಂದಲೇ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ತಿಳಿಸಲಾಗಿದೆ.ಒಟ್ಟಾರೆ, ಸನ್ ರೈಸ್ ಡಿ-ಫಾರ್ಮಸಿ ಕಾಲೇಜಿನ ಈ ನೂರಕ್ಕೆ ನೂರರಷ್ಟು ಫಲಿತಾಂಶವು ಸಂಸ್ಥೆಯ ಶೈಕ್ಷಣಿಕ ಬದ್ಧತೆ, ಗುಣಮಟ್ಟದ ಬೋಧನೆ ಹಾಗೂ ವಿದ್ಯಾರ್ಥಿಗಳ ಪರಿಶ್ರಮದ ಪ್ರತೀಕವಾಗಿದ್ದು, ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಸಾಧನೆಗಳು ಮುಂದುವರಿಯಲಿ ಎಂಬ ಆಶಯವನ್ನು ಶಿಕ್ಷಣ ಪ್ರೇಮಿಗಳು ವ್ಯಕ್ತಪಡಿಸಿದ್ದಾರೆ.

# ಯುವಕರು ದುಶ್ಚಟಗಳಿಂದ ದೂರವಿದ್ದು ಸಾಧನೆಗೆ ಹತ್ತಿರವಾಗಲಿ: ಮಹಿಬೂಬ್ ಮದ್ಲಾಪುರ

❑ ನೈಜ್ಯ ದೇಸೆ ನ್ಯೂಸ್

ಮಾನ್ವಿ: ನೀರಮಾನ್ವಿ ಸರಕಾರಿ ಪ್ರೌಢ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ಶಾಲಾ ಮಕ್ಕಳೊಂದಿಗೆ ಉದ್ಘಾಟಿಸಲಾಯಿತು.

ಸಂಪನ್ಮೂಲ ವ್ಯಕ್ತಿ ಮಹಿಬೂಬ್ ಮದ್ಲಾಪುರ ಮಾತನಾಡುತ್ತಾ "ವಿದ್ಯಾರ್ಥಿಗಳು ಗುಟ್ಕಾ, ಮದ್ಯಪಾನ, ಧೂಮಪಾನ, ಮೊಬೈಲ್ ಗೇಮಿಂಗ್, ಬೆಟ್ಟಿಂಗ್ ಹಾಗೂ ತಂಬಾಕಿನ ವಿವಿಧ ದುಶ್ಚಟಗಳಿಂದ ದೂರವಿದ್ದು ಸಾಧನೆ ಕಡೆ ಗಮನ ಹರಿಸಬೇಕು. ತಂಬಾಕು ಸೇವನೆಯಿಂದ ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಗಳು ಉಂಟಾಗಿ ಅನೇಕ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತಿವೆ" ಎಂದು ಹೇಳಿದರು. "ಉತ್ತಮ ಸ್ನೇಹಿತರ ಸಹವಾಸ, ಪುಸ್ತಕ ಓದು, ಕ್ರೀಡೆ ಹಾಗೂ ಸಂಗೀತದಂತಹ



ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ದುಶ್ಚಟಗಳಿಂದ ಆರೋಗ್ಯ ಹಾನಿ, ಆರ್ಥಿಕ ಸಮಸ್ಯೆ ಹಾಗೂ ಸಾಮಾಜಿಕ ಅಗೌರವ ಎದುರಾಗುತ್ತದೆ" ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.


ವಲಯ ಮೇಲ್ವಿಚಾರಕ ಗುರುರಾಜ್ ಮಾತನಾಡಿ ಸಂಸ್ಥೆ ವತಿಯಿಂದ ತಂಬಾಕು ವಿರೋಧಿ ದಿನಾಚರಣೆ, ಮಾದಕ ವಸ್ತು ವಿರೋಧಿ ಜಾಗೃತಿ, ಪರಿಸರ ಹಾಗೂ ಆರೋಗ್ಯ ಸಂಬಂಧಿತ ಅನೇಕ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ" ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯ ಮಕ್ಬೂಲ್ ಅಹ್ಮದ್, ಶಿಕ್ಷಕರಾದ ಜಯಣ್ಣ, ಲಕ್ಷ್ಮೀದೇವಿ ಹಾಗೂ ವಲಯದ ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ವಾಲ್ಮೀಕಿ ಭವನ ನಿರ್ಮಾಣ ಕಾಮಗಾರಿಗೆ ಶೀಘ್ರ ಚಾಲನೆ ನೀಡಲು ಸೂಚನೆ

❑ ನೈಜ್ಯ ದೇಸೆ ನ್ಯೂಸ್

ಮಾನ್ವಿ: ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದ ಸಿಂಧನೂರು ರಸ್ತೆಯಲ್ಲಿರುವ ಪ್ರಥಮ ದರ್ಜೆ ಕಾಲೇಜು ಮುಂಭಾಗದಲ್ಲಿ ನಿರ್ಮಾಣಗೊಳ್ಳಲಿರುವ ವಾಲ್ಮೀಕಿ ಭವನದ ಸ್ಥಳವನ್ನು ಮಾಜಿ ಸಚಿವರು, ವಿಧಾನ ಪರಿಷತ್ತಿನ ಮಾಜಿ ಸಭಾ ನಾಯಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು ಹಾಗೂ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯಕ್ ಪರಿಶೀಲಿಸಿದರು.

ಈ ವೇಳೆ ಸ್ಥಳದಲ್ಲಿದ್ದ ಸಂಬಂಧಿತ ಅಧಿಕಾರಿಗಳಾದ ಪಿಡಬ್ಲ್ಯುಡಿ ಅಧಿಕಾರಿಗಳು ಹಾಗೂ ಸಹಾಯಕ ಇಂಜಿನಿಯರ್ ತಿಮ್ಮಯ್ಯ ಅವರಿಗೆ ಕಾಮಗಾರಿಯನ್ನು ಕೂಡಲೇ ಆರಂಭಿಸಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ಈಗಾಗಲೇ ಭೂಮಿಪೂಜೆ ನೆರವೇರಿದ್ದು, ಸಿದ್ಧಪಡಿಸಲಾದ ನೀಲನಕ್ಷೆ ಹಾಗೂ ಅಂದಾಜು ಪತ್ರಿಕೆಯಂತೆ ಜಿ+1 ಮಾದರಿಯ ಕಟ್ಟಡ ಕಾಮಗಾರಿಯನ್ನು ಆರಂಭಿಸಿ ಗುಣಮಟ್ಟದೊಂದಿಗೆ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ



ಕಟ್ಟುನಿಟ್ಟಿನ ನಿರ್ದೇಶನ ನೀಡಲಾಯಿತು. ವಾಲ್ಮೀಕಿ ಭವನ ನಿರ್ಮಾಣಕ್ಕಾಗಿ ಎರಡು ಕೋಟಿ ರೂಪಾಯಿ ಅನುದಾನವನ್ನು ಮೀಸಲಿಡಲಾಗಿದ್ದು, ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಸಮಾಜದ ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಸಮುದಾಯ ಕಾರ್ಯಕ್ರಮಗಳಿಗೆ ಅನುಕೂಲವಾಗುವಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಕೆ. ಶಾಂತಪ್ಪ, ರುದ್ರಪ್ಪ ಅಂಗಡಿ, ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಬಿ.ಕೆ. ಅಮರೇಶಪ್ಪ (ವಕೀಲರು), ರೌಡ್ರು ಮಹಾಂತೇಶ್ ಸ್ವಾಮಿ, ಸೈಯದ್ ಖಾಲಿದ್ ಖಾದ್ರಿ, ರಾಜ ಸುಭಾಷ್ ಚಂದ್ರ ನಾಯಕ್, ಹುಸೇನ್ ಬಾಷಾ ಕೊಡಲಿ, ಸತ್ತಾರ್ ಬಂಗ್ಲೆವಾಲೆ, ಹಿದಾಯತ್ ನಾಯಕ್, ಹನುಮಂತರಾಯ ಯರಮಲದೊಡ್ಡಿ, ಹಂಪಯ್ಯ ನಾಯಕ್, ಕಾಮೇಶ್, ಪರಿಶಿಷ್ಟ ಪಂಗಡ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಭಾಗಯ್ಯ ನಾಯಕ್ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪಾಟೀಲ್ ಸಿಬಿಎಸ್ಇ ಶಾಲೆಯಲ್ಲಿ ಕೃತಕ ಬುದ್ಧಿಮತ್ತೆ (AI) ಮತ್ತು ರೋಬೋಟಿಕ್ಸ್ ಕುರಿತು ಪಾಲಕರ ಓರಿಯೆಂಟೇಶನ್ ಕಾರ್ಯಕ್ರಮ ಯಶಸ್ವಿ

❑ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ನಗರದ ಪಾಟೀಲ್ ಸಿಬಿಎಸ್ಇ ಶಾಲೆಯಲ್ಲಿ ವತಿಯಿಂದ ವಿದ್ಯಾರ್ಥಿಗಳು ಹಾಗೂ ಪಾಲಕರಿಗಾಗಿ ಕೃತಕ ಬುದ್ಧಿಮತ್ತೆ (Artificial Intelligence - AI) ಮತ್ತು ರೋಬೋಟಿಕ್ಸ್ ಡೆಮೊ ಕುರಿತ ವಿಶೇಷ ಪಾಲಕರ ಓರಿಯೆಂಟೇಶನ್ ಕಾರ್ಯಕ್ರಮವನ್ನು ಯಶಸ್ವಿ ಕಾರ್ಯಕ್ರಮದಲ್ಲಿ ಮಾತನಾಡಿದ ಪಾಟೀಲ್ ಸಂಸ್ಥೆಯ ಮುಖ್ಯಸ್ಥ ಆರ್.ಸಿ. ಪಾಟೀಲ್, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಕೇವಲ ಪಠ್ಯಾಧಾರಿತ ಶಿಕ್ಷಣಕ್ಕೆ ಸೀಮಿತವಾಗದೆ, ತಂತ್ರಜ್ಞಾನ ಜ್ಞಾನವನ್ನು ಕೂಡ ಪಡೆದುಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಸಮಸ್ಯೆ ಪರಿಹಾರ ಕೌಶಲ್ಯ, ತಾರ್ಕಿಕ ಚಿಂತನೆ ಹಾಗೂ ಹೊಸ ಆವಿಷ್ಕಾರಗಳ ಬಗ್ಗೆ ಆಸಕ್ತಿ ಮೂಡಿಸಲು AI ಮತ್ತು ರೋಬೋಟಿಕ್ಸ್ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. . ಆಧುನಿಕ ತಂತ್ರಜ್ಞಾನ ಯುಗದಲ್ಲಿ ವಿದ್ಯಾರ್ಥಿಗಳನ್ನು ಭವಿಷ್ಯದ



ಸವಾಲುಗಳಿಗೆ ಸಜ್ಜುಗೊಳಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮದಲ್ಲಿ ಪಾಲಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು. ತಜ್ಞರು ಕೃತಕ ಬುದ್ಧಿಮತ್ತೆಯ ಮೂಲಭೂತ ಅಂಶಗಳು, ಅದರ ಕಾರ್ಯವೈಖರಿ ಹಾಗೂ ಶಿಕ್ಷಣ, ಆರೋಗ್ಯ, ಕೃಷಿ, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅದರ ಬಳಕೆಯ ಕುರಿತು ವಿವರವಾದ ಮಾಹಿತಿ ನೀಡಿದರು.

ಇತ್ತೀಚಿನ ದಿನಗಳಲ್ಲಿ ವಿಶ್ವದಾದ್ಯಂತ ೦ಖ ತಂತ್ರಜ್ಞಾನ ವೇಗವಾಗಿ ಬೆಳೆಯುತ್ತಿದ್ದು, ವಿದ್ಯಾರ್ಥಿಗಳು ಶಾಲಾ ಹಂತದಲ್ಲಿಯೇ ಇದರ ಬಗ್ಗೆ ಅರಿವು ಹೊಂದುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ರೀತಿಯ






ರೋಬೋಟಿಕ್ಸ್ ಮಾದರಿಗಳ ಪ್ರಾತ್ಯಕ್ಷಿಕೆಯನ್ನು ನಡೆಸಲಾಯಿತು. ವಿದ್ಯಾರ್ಥಿಗಳೇ ಸಿದ್ಧಪಡಿಸಿದ ಕೆಲವು ಮಾದರಿಗಳು ಹಾಗೂ ಸ್ವಯಂಚಾಲಿತವಾಗಿ ಕಾರ್ಯನಿರ್ವಹಿಸುವ ರೋಬೋಟ್ಗಳ ಪ್ರದರ್ಶನ ಪಾಲಕರ ಗಮನ ಸೆಳೆಯಿತು. ಸೆನ್ಸರ್ ತಂತ್ರಜ್ಞಾನ, ಕೋಡಿಂಗ್ ಹಾಗೂ ಯಂತ್ರಗಳ ಕಾರ್ಯವಿಧಾನದ ಬಗ್ಗೆ ಸರಳವಾಗಿ ವಿವರಿಸಲಾಯಿತು.

ರೋಬೋಟ್ಗಳು ಹೇಗೆ ನಿರ್ದೇಶನಗಳನ್ನು ಅನುಸರಿಸುತ್ತವೆ, ಸಮಸ್ಯೆಗಳನ್ನು ಹೇಗೆ ಪರಿಹರಿಸುತ್ತವೆ ಎಂಬುದನ್ನು ಪ್ರಾಯೋಗಿಕವಾಗಿ ತೋರಿಸಲಾಯಿತು. ಪಾಲಕರಿಗೆ ವಿದ್ಯಾರ್ಥಿಗಳ ಕಲಿಕೆಯಲ್ಲಿ ತಂತ್ರಜ್ಞಾನದ ಮಹತ್ವ, ೦ಖ ಮತ್ತು ರೋಬೋಟಿಕ್ಸ್ ಕ್ಷೇತ್ರದಲ್ಲಿ ಲಭ್ಯವಿರುವ ಉದ್ಯೋಗಾವಕಾಶಗಳು ಹಾಗೂ ಭವಿಷ್ಯದ ವೃತ್ತಿಜೀವನದ ಅವಕಾಶಗಳ ಕುರಿತು ಮಾಹಿತಿ ನೀಡಲಾಯಿತು. ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಶಿಕ್ಷಣಕ್ಕೆ ಸೀಮಿತವಾಗದೆ, ತಂತ್ರಜ್ಞಾನ ಕೌಶಲ್ಯಗಳನ್ನು ಕೂಡ ಬೆಳೆಸಿಕೊಳ್ಳಬೇಕೆಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ನೀಡಲಾಯಿತು. ಕಾರ್ಯಕ್ರಮದ ಕೊನೆಯಲ್ಲಿ ಪಾಲಕರು ಶಾಲೆಯ ಈ ವಿನೂತನ ಪ್ರಯತ್ನವನ್ನು ಶ್ಲಾಘಿಸಿ, ಮಕ್ಕಳ ಭವಿಷ್ಯದ ಬೆಳವಣಿಗೆಗೆ ಇಂತಹ ಕಾರ್ಯಕ್ರಮಗಳು ಅತ್ಯಂತ ಉಪಯುಕ್ತವಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ಕೂಡ ರೋಬೋಟಿಕ್ಸ್ ಮತ್ತು ೦ಖ ಕುರಿತು ಹೆಚ್ಚಿನ ಆಸಕ್ತಿ ತೋರಿಸಿ, ಭವಿಷ್ಯದಲ್ಲಿ ಈ ಕ್ಷೇತ್ರಗಳಲ್ಲಿ ಹೆಚ್ಚಿನ ಜ್ಞಾನವನ್ನು ಪಡೆಯುವ ಉತ್ಸಾಹ ವ್ಯಕ್ತಪಡಿಸಿದರು.

## ಸಾಹಿತ್ಯ ಸಿಂಚನ

ಜ್ಞಾನ ಸಂಗಮದ ಸಿರಿಯಿದು !
ಸವಿಚಾರವಂತರ ಕೂಟವಿದು !
ಮರೆಯಲಾಗದ ಸವಿಯಿದು !
ಕನ್ನಡದ ಸಂಗಮದ ಕೂಟವಿದು.!!

ದಾರ್ಶನಿಕರ ಚರಿತೆಯ ಹೇಳಿತು !
ಶೂರ ಧೀರರ ಕಥೆಯ ಕಲಿಸಿತು !
ಸೈನಿಕ ರೈತರ ನಿತ್ಯ ಕೊಂಡಾಡಿತು !
ಬಡವ ಬಲ್ಲಿದರೊಂದು ಮಾಡಿತು!!

ಎಂಥಹಾ ಸೊಬಗಿನ ಸಿರಿಯಿದು !
ಚೆಲುವ ಚಂದದ ಕನ್ನಡ ಕೂಟವಿದು!
ಕಲೆ ಸಾಹಿತ್ಯ ಸಂಗೀತದ ಬೀಡಿದು !
ಕರಕುಶಲ ಕಲಿಸುವ ಗುಡಿಯಿದು.!

ಪಂಚ ವಾರ್ಷಿಕದ ಜಯವಿದು !
ಏಳು ದಿನಗಳ ಏಳು ವಿಷಯದ!
ಅನುಭಾವಿಗಳ ಸಂಗಮವಿದು !
ಅಂತರ್ಜಾಲ ಕಾರ್ಯಕ್ರಮ ನಡೆಯಿತು!!

ಇತಿಹಾಸ ಸಾರಿದಂತ ಕಥೆಯಿದು !
ಇತಿಹಾಸಗಳ ಪುಟ ಸೇರಿತು !
ಉತ್ಸಾಹ ಹೊಮ್ಮುವ ಕಥೆಯಿದು!
ಉತ್ತಮ ಉಲ್ಲಾಸದ ಆಲಯವಿದು!!

ಯೋಗಧ್ಯಾನ ಪಂಚಾಂಗ ಪಠಣ!
ಜನ್ಮದಿನ ಮದುವೆ ಶುಭಕೋರಿತು!
ಕಥೆಕವನ ನೃತ್ಯನಾಟಕ ನಡೆಯಿತು!
ಶರಣ ಸಂತ ದಾಸರ ಕಥೆ ಹೇಳಿತು!!

ಸುಜ್ಞಾನವಂತರ ಸಂಗಮವಿದು !
ಭಾವೈಕ್ಯತೆಯ ಸಾರುವ ಗೂಡಿದು!
ಜ್ಞಾನ ಸಂಗಮ ವಿಚಾರ ವೇದಿಕೆಯಿದು!
ಪಂಪಯ್ಯನ ಅನುಭವದ ಕವನವಿದು!!

ಪಂಪಯ್ಯಸ್ವಾಮಿ ಸಾಲಿಮಠ ಸಿಂಧನೂರು

### ದೇವದುರ್ಗ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ನಗರ ಅಧ್ಯಕ್ಷರಾಗಿ ಖಾಜಾ ಪಾಶ ನೇಮಕ

# ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಬಾಬು ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ರಾಯಚೂರು ಜಿಲ್ಲೆಯ ಅರಕೇರದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಕೆಪಿಸಿಸಿ ಮಹಿಳಾ ಘಟಕದ ಉಪಾಧ್ಯಕ್ಷರಾದ ಶ್ರೀಮತಿ ಶ್ರೀದೇವಿ ಆರ್. ನಾಯಕ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ವಿವಿಧ ಹುದ್ದೆಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.**

ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ರಾಜ್ಯಾಧ್ಯಕ್ಷರ ಸೂಚನೆ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷರ ಆದೇಶದ ಮೇರೆಗೆ, ದೇವದುರ್ಗ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷರಾಗಿ ಶ್ರೀ ಬಾಬು (ತಂದೆ: ಇಮಾಮ್) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ.



ದೇವದುರ್ಗ ತಾಲೂಕು ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರ ಶಿಫಾರಸಿನ ಮೇರೆಗೆ ನಡೆದ ಈ ನೇಮಕಾತಿಯು ಪಕ್ಷದ ಸಂಘಟನಾ ಹಿತದೃಷ್ಟಿಯಿಂದ ಮಾಡಲಾಗಿದ್ದು, ನೂತನ ಉಪಾಧ್ಯಕ್ಷರು ಹೆಚ್ಚಿನ ಸಂಖ್ಯೆಯಲ್ಲಿ ಯುವಕರನ್ನು ಕಾಂಗ್ರೆಸ್ ಪಕ್ಷದತ್ತ ಸೆಳೆಯುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಆದೇಶ ಪತ್ರದಲ್ಲಿ ತಿಳಿಸಲಾಗಿದೆ.

ಇದೇ ಸಂದರ್ಭದಲ್ಲಿ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಲ್ಪಸಂಖ್ಯಾತರ ಘಟಕದ ಜಿಲ್ಲಾ ಅಧ್ಯಕ್ಷರ ಆದೇಶ ಹಾಗೂ ಶ್ರೀಮತಿ ಶ್ರೀದೇವಿ ಆರ್. ನಾಯಕ್ ಅವರ ಶಿಫಾರಸಿನ ಮೇರೆಗೆ ಗೌರಮಪೇಟೆಯ ಖಾಜಾ ಪಾಶ ಅವರನ್ನು ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ದೇವದುರ್ಗ ನಗರ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ. ನೂತನ ನಗರ ಅಧ್ಯಕ್ಷರು ತಕ್ಷಣದಿಂದಲೇ ಜವಾಬ್ದಾರಿಯನ್ನು ವಹಿಸಿಕೊಂಡು ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಅಲ್ಪಸಂಖ್ಯಾತ ಸಮುದಾಯದ ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ದೇವದುರ್ಗದ ಸದರ್ ಖಾಜಿಯಾಗಿರುವ ಮೊಹಮ್ಮದ್ ಆಸಿಫ್ ಜಿಲಾನಿ ಹಾಗೂ ಕಾಂಗ್ರೆಸ್ ಮುಖಂಡ ಮಹಮ್ಮದ್ ಜುನೈದ್ ಅವರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು.

ಈ ಎರಡೂ ನೇಮಕಾತಿಗಳಿಗೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಶುಭ ಹಾರೈಸಿದ್ದು, ಪಕ್ಷದ ಸಂಘಟನೆ ಮತ್ತಷ್ಟು ಬಲಗೊಳ್ಳಲಿ ಎಂದು ಆಶಿಸಿದ್ದಾರೆ. ಕಾರ್ಯಕ್ರಮದಲ್ಲಿ ದೇವದುರ್ಗ ತಾಲೂಕು ಕಾಂಗ್ರೆಸ್ ಪಕ್ಷದ ವಿವಿಧ ಘಟಕಗಳ ಅಧ್ಯಕ್ಷರು, ಪದಾಧಿಕಾ–ರಿಗಳು ಹಾಗೂ ಅರಕೇರ ಘಟಕದ ಸದಸ್ಯರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ವರದಿ: ಖಾಜಾಹುಸೇನ್ ಬಾಬಾ ಜಾಲಹಳ್ಳಿ

# ಚೆನ್ನಮ್ಮಾಜಿ ಮೂರ್ತಿ ಪ್ರತಿಷ್ಠಾಪನೆ 3ನೇ ವಾರ್ಷಿಕೋತ್ಸವ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ವೀರರಾಣಿ ಶ್ರೀ ಕಿತ್ತೂರ ಚೆನ್ನಮ್ಮ ಪುತ್ಥಳಿ ನಿರ್ಮಾಣ ಸೇವಾ ಸಮಿತಿ ತಾಳಿಕೋಟಿ ವತಿಯಿಂದ ಚೆನ್ನಮ್ಮಾಜಿ ಮೂರ್ತಿ ಪ್ರತಿಷ್ಠಾಪನೆಯ 3 ನೇ ವಾರ್ಷಿಕೋತ್ಸವ ಅಂಗವಾಗಿ ಇಂದಿನಿಂದ(ಜೂನ್.11ರಿಂದ 22) ರವರೆಗೆ ರಾಜವಾಡೆ ಆವರಣದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜೂನ್ 11 ರಿಂದ 22 ರವರೆಗೆ ಪ್ರತಿದಿನ ಸಂಜೆ 7 ರಿಂದ 8 ಗಂಟೆಯವರೆಗೆ ರಾಷ್ಟ್ರಮಾತೆ ಕಿತ್ತೂರು ಚೆನ್ನಮ್ಮ ರವರ ಪುರಾಣ ಕಾರ್ಯಕ್ರಮ ನಡೆಯುವುದು.**

ಹಿಕ್ಕನಗುತ್ತಿ ಲಿಂಗಾಯತ ಮಹಾ ಮಠದ ಪೂಜ್ಯ ಶ್ರೀ ಮ.ನಿ.ಪ್ರ. ಪ್ರಭುಲಿಂಗ ಮಹಾಸ್ವಾಮಿಗಳು ಪುರಾಣ ನಡೆಸಿಕೊಡುವರು. ಕುದುರಗೊಂಡ ಗ್ರಾಮದ ಕುಮಾರ ಭಾವಿಮನಿ



ಹಾಗೂ ಬಸನಗೌಡ ಬಿರಾದಾರ ಸಂಗೀತ ಕಾರ್ಯಕ್ರಮ ನೆರವೇರಿಸಿ ಕೊಡುವರು. ಪ್ರತಿದಿನ ನಡೆಯುವ ಪುರಾಣ ಕಾರ್ಯಕ್ರಮದಲ್ಲಿ ರೈತ ದಂಪತಿಗಳಿಗೆ, ಶಿಕ್ಷಕರಿಗೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಪೌರಕಾರ್ಮಿಕರಿಗೆ, ಮಾಜಿ ಸೈನಿಕರಿಗೆ, ಅಡತ ಮರ್ಚೆಂಟ್ ಮಾಲೀಕರಿಗೆ, ಡ್ರೈವರ್–ಮಾಲಿಕರಿಗೆ, ವರ್ತಕರಿಗೆ, ಕಟ್ಟಡ ಕಾರ್ಮಿಕರಿಗೆ, ಅಂಗನವಾಡಿ ಆಶಾ ಬಿಸಿಯೂಟ ಸಿಬ್ಬಂದಿಗಳಿಗೆ ಸನ್ಮಾನಿಸಲಾಗುವುದು.

ಜೂನ್ 21ರಂದು ಮಧ್ಯಾಹ್ನ 3 ಗಂಟೆಯಿಂದ ಪಟ್ಟಣದ ದೇವರ ಹಿಪ್ಪರಗಿ ರಸ್ತೆಯಲ್ಲಿರುವ ರಾಣಿ ಚೆನ್ನಮ್ಮ ಸರ್ಕಲ್ ದಿಂದ ರಾಜವಾಡೆಯವರೆಗೆ ಚೆನ್ನಮ್ಮಾಜಿಯ ಕಂಚಿನ ಮೂರ್ತಿಯ ಭವ್ಯ ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ನಡೆಯುವುದು. ಜೂನ್ 22ರಂದು ಬೆಳಿಗ್ಗೆ 10–00 ಘಂಟೆಗೆ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಜರುಗಲಿವೆ.

ಅಂದೇ ಸಂಜೆ 6:00 ಘಂಟೆಗೆ ತೆಲಂಗಾಣ ರಾಜ್ಯದ ಮಲ್ಲಯ್ಯಗಿರಿ ದೇಗುಲಮಡಿ ಮತ್ತು ಬಸವಕಲ್ಯಾಣ ಆಶ್ರಮದ ಪೀಠಾಧಿಪತಿ ಪರಮಪೂಜ್ಯ ಡಾ. ಶ್ರೀ ಬಸವಲಿಂಗ ಅವಧೂತರ ಸಾನಿಧ್ಯದಲ್ಲಿ ಪುರಾಣ ಮಹಾ ಮಂಗಲ ಕಾರ್ಯಕ್ರಮ ಜರುಗುವುದು ಇದರಲ್ಲಿ ನಾಡಿನ ಹರಚರ ಗುರುಮೂರ್ತಿಗಳು, ರಾಜಕೀಯ ದುರೀಣರು, ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ಸಮಾಜದ ಗಣ್ಯರು ಹಿರಿಯರು ಉಪಸ್ಥಿತರಿರುವರು. ಯಾವತ್ತು ತಾಳಿಕೋಟಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕಾರ್ಯಕ್ರಮ ಸಂಚಾಲಕಿ, ಪುರಸಭೆ ಮಾಜಿ ಅಧ್ಯಕ್ಷೆ ನೀಲಮ್ಮಗೌಡ್ತಿ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕ ನಾಡಗೌಡರ ತಾಳಿಕೋಟಿ ಪ್ರವಾಸ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಹಾಗೂ ಮುದ್ದೇಬಿಹಾಳ ಮತಕ್ಷೇತ್ರದ ಶಾಸಕರಾದ ಸಿ.ಎಸ್.ನಾಡಗೌಡ ಅಪ್ಪಾಜಿಯವರು ಇಂದು(ಜೂನ್ 11) ತಾಳಿಕೋಟಿಗೆ ಆಗಮಿಸಲಿದ್ದು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12–00 ಘಂಟೆಗೆ ಪಟ್ಟಣದ ಗಡಿ ಸೋಮನಾಳ ರಸ್ತೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಅಗ್ನಿಶಾಮಕ ಠಾಣೆಯ ಕಟ್ಟಡವನ್ನು ಉದ್ಘಾಟಿಸುವರು.**



ನಂತರ ಮಧ್ಯಾಹ್ನ1–00 ಘಂಟೆಗೆ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಆರ್ ಐ ಡಿ ಎಫ್ 31ರ ಯೋಜನೆ ಅಡಿಯಲ್ಲಿ ತಾಳಿಕೋಟಿ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೂ.500 ಲಕ್ಷ ಮೊತ್ತದ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿ ಮತ್ತು 2024– 25 ಹಾಗೂ 2025–26 ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆ ಅಡಿಯಲ್ಲಿ ತಾಳಿಕೋಟಿ ಮುಖ್ಯ ಮಾರುಕಟ್ಟೆ ಪ್ರಾಂಗಣ ಹಾಗೂ ಮುದ್ದೇಬಿಹಾಳ ಮತ್ತು ನಾಲತವಾಡ ಉಪ ಮಾರುಕಟ್ಟೆ ಪ್ರಾಂಗಣದ ವಿವಿಧ 9 ಸಂಖ್ಯೆ, ರೂ.170 ಲಕ್ಷ ಮೊತ್ತದ ಕಾಮಗಾರಿಗೆ ಭೂಮಿ ಪೂಜೆ ನೆರವೇ–ರಿಸುವರು ಎಂದು ಶಾಸಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ರಾಂಪೂರ ಕೆರೆ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ; ಕುಡಿಯುವ ನೀರಿನ ಗುಣಮಟ್ಟಕ್ಕೆ ಆದ್ಯತೆ ನೀಡಲು ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ನಗರದ ಜನತೆಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವ ಉದ್ದೇಶದಿಂದ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಕೈಗೊಳ್ಳಲಾಗುತ್ತಿರುವ ರಾಂಪೂರ ಕೆರೆ ಶುದ್ಧೀಕರಣ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಮಾಜಿ ಸಚಿವರು, ವಿಧಾನ ಪರಿಷತ್ತಿನ ಮಾಜಿ ಸಭಾ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.**

ಕೆರೆಯ ವಿವಿಧ ಭಾಗಗಳಿಗೆ ಭೇಟಿ ನೀಡಿ ಕಾಮಗಾರಿಗಳ ಪ್ರಗತಿಯನ್ನು ಅವಲೋಕಿಸಿದ ಅವರು, ರಾಂಪೂರ ಕೆರೆ ರಾಯಚೂರು ನಗರದ ಪ್ರಮುಖ ಕುಡಿಯುವ ನೀರಿನ ಮೂಲಗಳಲ್ಲಿ ಒಂದಾಗಿದ್ದು, ಇದರ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಬೇಕು ಎಂದು ಹೇಳಿದರು. ಕೆರೆಯಲ್ಲಿ ಸಂಗ್ರಹವಾಗಿರುವ ಹೂಳು ಮತ್ತು ಮಣ್ಣಿನ ಗುಣಮಟ್ಟವನ್ನು ವೈಜ್ಞಾನಿಕವಾಗಿ ಪರೀಕ್ಷಿಸಿ, ಅದರ ಫಲವತ್ತತೆ ಹಾಗೂ ಪರಿಸರದ ಮೇಲಿನ ಪರಿಣಾಮಗಳ ಕುರಿತು ಸಮಗ್ರ ವರದಿ



ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜನತೆಗೆ ಸರಬರಾಜಾಗುವ ನೀರಿನ ಗುಣಮಟ್ಟದಲ್ಲಿ ಯಾವುದೇ ರಾಜಿ ಆಗಬಾರದು. ಕೆರೆಯ ನೀರು ಕಲುಷಿತಗೊಳ್ಳದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ನೀರಿನ ಮೂಲಗಳನ್ನು ಸಂರಕ್ಷಿಸುವುದು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದ್ದು, ಸಂಬಂಧಿತ ಅಧಿಕಾರಿಗಳು ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದು ತಿಳಿಸಿದರು.

ಹೊಸದಾಗಿ ಅಭಿವೃದ್ಧಿಪಡಿಸಲಾಗುತ್ತಿರುವ ಕೆರೆಯ ಸುತ್ತಮುತ್ತ ಸುರಕ್ಷತಾ ಕ್ರಮಗಳ ಭಾಗವಾಗಿ ಗುಣಮಟ್ಟದ ಫೆನ್ಸಿಂಗ್ ಅಳವಡಿಸಬೇಕು. ಇದ–ರಿಂದ ಕೆರೆಯ ಸಂರಕ್ಷಣೆ ಸಾಧ್ಯವಾಗುವುದರ ಜೊತೆಗೆ ಅನಧಿಕೃತ ಪ್ರವೇಶ ಹಾಗೂ ಮಾಲಿನ್ಯ ತಡೆಗಟ್ಟಲು ಸಹಕಾರಿಯಾಗಲಿದೆ ಎಂದು ಹೇಳಿದರು.

ರಾಂಪೂರ ಕೆರೆಯಿಂದ ರಾಯಚೂರು ನಗರದ 18 ವಾರ್ಡ್‌ಗಳಿಗೆ ಹಾಗೂ ಕೃಷ್ಣಾ ನದಿಯಿಂದ 12 ವಾರ್ಡ್‌ಗಳಿಗೆ ಕುಡಿಯುವ ನೀರು ಪೂರೈಕೆಯಾಗುತ್ತಿದೆ. ನಗರದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಭವಿಷ್ಯದ ಅಗತ್ಯತೆಗಳಿಗೆ ಅನುಗುಣವಾಗಿ ನೀರು ಸಂಗ್ರಹಣೆ, ಶುದ್ಧೀಕರಣ ಹಾಗೂ ವಿತರಣಾ ವ್ಯವಸ್ಥೆಗಳನ್ನು ಮತ್ತಷ್ಟು ಬಲಪಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ, ಸಾರ್ವಜನಿಕ–ರಿಗೆ ಉತ್ತಮ ಮೂಲಸೌಕರ್ಯ ಹಾಗೂ ನಿರಂತರ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಕೆ. ಶಾಂತಪ್ಪ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ಸಾಜಿದ್ ಸಮೀರ್, ರುದ್ರಪ್ಪ ಅಂಗಡಿ, ಬಸವರಾಜ್ ಪಾಟೀಲ್ ಅತ್ತನೂರು, ಹರಿಬಾಬು, ತಿಮ್ಮಪ್ಪ ಅಸ್ಕಿಹಾಳ ಸೇರಿದಂತೆ ಹಲವು ಮುಖಂಡರು ಹಾಗೂ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಶೇ.50ರಷ್ಟು ದಂಡದ ಮೊತ್ತ ರಿಯಾಯಿತಿಗೆ ಅವಕಾಶ: ನ್ಯಾ.ಸಿದ್ದರಾಮಪ್ಪ ಕಲ್ಯಾಣರಾವ್

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 10 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ಕಾನೂನಾತ್ಮಕವಾಗಿ ವಿಧಿಸಲಾಗಿರುವ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ, ಪ್ರಕರಣಗಳನ್ನು ಇತ್ಯರ್ಥ–ಪಡಿಸಿಕೊಳ್ಳಲು ಸಾರ್ವಜನಿಕರಿಗೆ ಇದೇ ಜೂನ್ 21 ರಿಂದ ಜುಲೈ 10ರವರೆಗೆ ಸುವರ್ಣಾವಕಾಶ ಕಲ್ಪಿಸಲಾಗಿದೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ**



**ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು.**

ಜೂನ್ 10ರ ಬುಧವಾರ ದಂದು ನಗರದ ಜಿಲ್ಲಾ ನ್ಯಾಯಾಲಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇ–ರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಸಂಚಾರ ನಿಯಮ ಉಲ್ಲಂಘನೆ ಅಂತಹ ಅಪರಾಧಗಳು ಸಂಭವಿಸುತ್ತವೆ. ಅಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ದೊಡ್ಡದು ಮಾಡುವ ಬದಲು, ಸಾರ್ವಜನಿಕರಿಗೆ ಸುಲಭವಾಗಿ ಮುಕ್ತಾಯಗೊಳಿಸಿಕೊಳ್ಳಲು ಕರ್ನಾಟಕ ಸರ್ಕಾರದ ಜೊತೆ ಚರ್ಚಿಸಿ ಈ ರಿಯಾಯಿತಿ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಮೇ 2026 ಕ್ಕಿಂತ ಮೊದಲು ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ಗಳಲ್ಲಿ ದಾಖಲಾಗಿ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರವರೆಗೆ ದಾಖಲಾಗಿರುವ ಪ್ರಕರಣಗಳಿಗೆ ಶೇ.50ರಷ್ಟು ರಿಯಾಯಿತಿ ಅನ್ವಯವಾಗಲಿದ್ದು, ಸಾರ್ವಜನಿಕರು ನಿಗದಿತ ದಂಡದ ಅರ್ಧದಷ್ಟು ಮೊತ್ತವನ್ನು ಪಾವತಿಸಿ ತಮ್ಮ ಪ್ರಕರಣಗಳನ್ನು ಮುಕ್ತಾಯಗೊಳಿಸಿಕೊಳ್ಳಬಹುದು ಎಂದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಕಾರುಣ್ಯಾಶ್ರಮದಲ್ಲಿ ಕರವೇ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡ ಅವರ ಜನ್ಮದಿನ ಸಮಾರಂಭ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರ: ನಗರದ ವಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಟಿ. ಎ. ನಾರಾಯಣಗೌಡ ಬಣ) ಸಿಂಧನೂರು ತಾಲೂಕ ಘಟಕದ ವತಿಯಿಂದ ಕರವೇ ರಾಜ್ಯಾಧ್ಯಕ್ಷರಾದ ಟಿ.ಎ. ನಾರಾಯಣಗೌಡ ಅವರ 60ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ಆಶ್ರಮದಲ್ಲಿ ಅನ್ನ ಸಂತರ್ಪಣೆ ಹಾಗೂ ಹಣ್ಣುಹಂಪಲುಗಳನ್ನು ವಿತರಿಸುವ ಮೂಲಕ ಸರಳವಾಗಿ ಆಚರಿಸಲಾಯಿತು.**

ಈ ಕಾರ್ಯಕ್ರಮವನ್ನು ಕರವೇ ಜಿಲ್ಲಾ ಉಪಾಧ್ಯಕ್ಷರಾದ ದೇವೇಂದ್ರ ಗೌಡ ಎಲ್ಲಾ ಪದಾಧಿಕಾರಿಗಳೊಂದಿಗೆ ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ ಕರವೇ ತಾಲೂಕಾಧ್ಯಕ್ಷರಾದ ಎಲ್. ರಾಜಸಾಬ್ ಗಾಂಧಿನಗರ ಹಾಗೂ ಗೌರವಾಧ್ಯಕ್ಷರಾದ ಕಾಳಪ್ಪ ಮೇಸ್ತ್ರಿ ಇವರುಗಳನ್ನು




ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಿ ಶುಭ ಕೋರಲಾಯಿತು. ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಕರವೇ ಸಿಂಧನೂರು ತಾಲೂಕ ಅಧ್ಯಕ್ಷರಾದ ಎಲ್. ರಾಜಾಸಾಬ್ ಮಾತನಾಡಿ ಇಂದು ನಮ್ಮ ರಾಜ್ಯಾಧ್ಯಕ್ಷರ ಹುಟ್ಟು ಹಬ್ಬವನ್ನು ರಾಜ್ಯಾದ್ಯಂತ ಅನೇಕ ಸಮಾಜಪರ ಜನಪರ ಕಾರ್ಯಗಳನ್ನು ಮಾಡುವ ಮೂಲಕ ನೆರವೇರಿಸಲು ಆದೇಶಿಸಿದ್ದರು.

ನಮ್ಮ ತಾಲೂಕ ಪದಾಧಿಕಾ–ರಿಗಳ ಒಪ್ಪಿಗೆ ಮೇರೆಗೆ ಕಾರುಣ್ಯ ಆಶ್ರಮದಲ್ಲಿ ಅವರ ಜನ್ಮದಿನ ನಡೆಯುತ್ತಿರುವುದು ನಮ್ಮೆಲ್ಲ–ರಿಗೆ ಸಂತೋಷವನ್ನುಂಟು ಮಾಡಿದೆ. ಕನ್ನಡ ನಾಡಿನ ಉಳಿವಿಗಾಗಿ ನಮ್ಮ ನಾರಾಯಣಗೌಡ್ರು ತನು ಮನ ಧನ ಅರ್ಪಿಸುತ್ತಿದ್ದಾರೆ. ಅವರ ವಿನಂತಿಯನ್ನು ಯಾವುದೇ ಸರ್ಕಾರವಿರಲಿ ಸ್ವೀಕರಿಸಿ ಸ್ಪಂದಿಸುತ್ತಿರುವುದು ನಮ್ಮ ಸಂಘಟನೆಗೆ ಶಕ್ತಿ ತುಂಬಿದೆ. ಕನ್ನಡದ ನೆಲ ಜಲ ಭಾಷೆಯ ಉಳಿವಿಗಾಗಿ ನಮ್ಮ ನಾರಾಯಣಗೌಡರ ಹೋರಾಟವೇ ನಮಗೆ ಆದರ್ಶವಾಗಿದೆ.

ನಮ್ಮ ನಾಡಿನಲ್ಲಿ ನಾರಾಯಣಗೌಡರು ಎಂದರೆ ಕನ್ನಡ ಕನ್ನಡ ಎಂದರೆ ನಾರಾಯಣಗೌಡರು ಎನ್ನುವುದನ್ನು ತೋರಿಸಿಕೊಟ್ಟ ಕೀರ್ತಿ ನಮ್ಮ ರಾಜ್ಯಾಧ್ಯಕ್ಷರಿಗೆ ಸಲ್ಲುತ್ತದೆ. ಅವರ ಆಶಯದಂತೆ ನಮ್ಮ ಸಿಂಧನೂರಿನ ಈ ಕರುಣೆಯ ಕಾರುಣ್ಯ ಕುಟುಂಬದಲ್ಲಿ ಅವರ ಜನ್ಮದಿನವು ಜನ್ಮ ಸಾರ್ಥಕ ದಿನವಾಗಿ ನಾವೆಲ್ಲರೂ ಆಚರಿಸುತ್ತಿದ್ದೇವೆ. ಅವರು ಶತಾಯುಷಿಗಳಾಗಿ ನೊಂದವರ ಬಾಳಿಗೆ ಬೆಳಕಾಗಿ ಅನ್ಯಾಯಕ್ಕೆ ಖಡ್ಗವಾಗಿ ನ್ಯಾಯಕ್ಕೆ ಸಹೋದರನಾಗಿ ಎಲ್ಲರಿಗೆ ಸ್ಫೂರ್ತಿಯಾಗಿದ್ದಾರೆ ಎಂದು ಮಾತನಾಡಿ ರಾಜ್ಯಾಧ್ಯಕ್ಷರಿಗೆ ಶುಭ ಕೋರಿದರು.

ನಂತರ ಜಿಲ್ಲಾ ಉಪಾಧ್ಯಕ್ಷರಾದ ದೇವೇಂದ್ರಗೌಡ ಮಾತನಾಡಿ ಅವರು ಅದೆಷ್ಟೇ ಶ್ರೀಮಂತರಿದ್ದರೂ ಕೂಡ ಆಡಂಬರವಿಲ್ಲದೆ ತಮ್ಮ ಜನ್ಮದಿನವನ್ನು ಕಾರುಣ್ಯದಂತಹ ಪುಣ್ಯಕ್ಷೇತ್ರದಲ್ಲಿ ಆಚರಿಸಲು ನಮಗೆ ಸೂಚಿಸಿರುವುದು ಸಮಾಜ–ಕ್ಕೆ ಆದರ್ಶ ಕಾರ್ಯಕ್ರಮ ಇದಾಗಿದೆ ನಮ್ಮ ಸಂಘಟನೆಯನ್ನು ಬಲಪಡಿಸುವಲ್ಲಿ ಅವರ ಕನಸಿನ ಕನ್ನಡ ನಾಡನ್ನು ಕಟ್ಟಲು ನಾವೆಲ್ಲ ಶ್ರಮಿಸುತ್ತೇವೆ ಎಂದು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಟಿ. ಎ. ನಾರಾಯಣಗೌಡರ ಬಣದ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಉಪಾಧ್ಯಕ್ಷರಾದ ದೇವೇಂದ್ರಗೌಡ. ಗೌರವಾಧ್ಯಕ್ಷರಾದ ಕಾಳಪ್ಪ ಮೇಸ್ತ್ರಿ. ಉಪಾಧ್ಯಕ್ಷರಾದ ಬಸವರಾಜ ವಿಶ್ವಕರ್ಮ. ಭಾಷಾ ಸಾಬ್. ನಗರ ಘಟಕದ ಅಧ್ಯಕ್ಷರಾದ ಆರ್ ಎಕ್ಸ್ ಸುರೇಶ್. ನಗರ ಘಟಕದ ಉಪಾಧ್ಯಕ್ಷರಾದ ರವಿ ಹಿರೇಮಠ ಬಸಾಪುರ. ಮುಖಂಡರುಗಳಾದ ಕಾಶಿಪತಿ ವಿಶ್ವಕರ್ಮ.ಚಾನ್ ಗ್ರಾ. ಪಂ. ಸದಸ್ಯರು ಗಾಂಧಿನಗರ. ಲಕ್ಷ್ಮಣ ಗಾಂಧಿನಗರ. ರಾಮಕೃಷ್ಣ ಗಾಂಧಿನಗರ. ಬೀರಪ್ಪ ಸುಕಾಲಪೇಟೆ ಶೇಖರ್. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ.ಸಿದ್ದಯ್ಯ ಸ್ವಾಮಿ.ಮರಿಯಪ್ಪ.ಜ್ಯೋತಿ. ಹಾಗೂ ಕರವೇ ಹಲವಾರು ಮುಖಂಡರು ಉಪಸ್ಥಿತರಿದ್ದರು

## ನೇಮಕಾತಿ ಪ್ರಕಟಣೆ

**ಏಇಂ ನೇಮಕಾತಿ 2026 945 ಕೃಷಿ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ**

ವಿಜಯಪುರ ಮಹಾನಗರ ಪಾಲಿಕೆ ನೇಮಕಾತಿ 2026 ? 118 ನಾಗರಿಕ ಸೇವಕ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ವಿಜಯಪುರ ಮಹಾನಗರ ಪಾಲಿಕೆ ನೇಮಕಾತಿ 2026: 118 ನಾಗರಿಕ ಸೇವಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ವಿಜಯಪುರ ಮಹಾನಗರ ಪಾಲಿಕೆ ಜೂನ್ 2026 ರ ಅಧಿಕೃತ ಅಧಿಸೂಚನೆಯ ಮೂಲಕ ನಾಗರಿಕ ಸೇವಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ವಿಜಯಪುರ ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 15-ಜುಲೈ-2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 10-06-2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15-ಜುಲೈ-2026 ಅಧಿಕೃತ ವೆಬ್‌ಸೈಟ್: vijayapuracity.mrc.gov.in

# ರಾಜಕೀಯ ದುರುದ್ದೇಶದಿಂದ ಸಮಾಜ ಬಲಿ: ಆರ್.ಕೆ.ನಾಯಕ ಆರೋಪ

**ನೈಜ್ಯ ದೆಸೆ ನ್ಯೂಸ್**

ಮಸ್ಕಿ: ಕೆಲವರ ರಾಜಕೀಯ ದುರುದ್ದೇಶದಿಂದ ಸಮಾಜವನ್ನು ಬಲಿಪಶು ಮಾಡಲು ಹೊರಟಿದ್ದಾರೆಂದು ಆರ್.ಕೆ.ನಾಯಕ ಆರೋಪಿಸಿದರು. ಪಟ್ಟಣದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ವಾಲ್ಮೀಕಿ ಭವನದಲ್ಲಿ ಸಮಾಜದ ಶಾಸಕ, ಮಾಜಿ ಶಾಸಕ ಸೇರಿದಂತೆ ಸಮಾಜದ ಮುಖಂಡರು ಸೇರಿಕೊಂಡು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ತಾಲೂಕಾಧ್ಯಕ್ಷರನ್ನಾಗಿ ನೇಮಿಸಿದ್ದರೂ, ಆದರೆ ನನ್ನ ಅವಧಿ ಮುಗಿಯೊದರೊಳಗೆ ಕೆಲವರ ರಾಜಕೀಯ ದುರುದ್ದೇಶದಿಂದ ನನ್ನ ಗಮನಕ್ಕೆ ಬಾರದೇ ಬೇರೊಬ್ಬರನ್ನು ತಾಲೂಕಾಧ್ಯಕ್ಷರಾಗಿ





ನೇಮಿಸಿದ್ದಾರೆ. ಆದರೆ ನನ್ನ ಅವಧಿ ಆಗಸ್ಟ್‌ರೆಗೆ ಇದ್ದು, ತಾಲೂಕಾಧ್ಯಕ್ಷ ಬದಲಾವಣೆ ಮಾಡುವ ಬಗ್ಗೆ ಸ್ಥಳೀಯರಾಗಲಿ, ಜಿಲ್ಲಾಧ್ಯಕ್ಷರಾಗಲಿ ನನ್ನನ್ನು ಸಂಪರ್ಕಿಸಿಲ್ಲ. ರಾಜಕೀಯ ಪ್ರಭಾವ ಬಳಸಿಕೊಂಡು ತರಾತುರಿಯಲ್ಲಿ ಬೇರೊಬ್ಬರನ್ನು ನೇಮಿಸಿದ್ದಾರೆ. ನನ್ನ ರಾಜಿನಾಮೆ ಪಡೆಯದೇ ಬೇರೊಬ್ಬರನ್ನು ನೇಮಿಸಲು ಕಾರಣ ತಿಳಿಸಬೇಕು,

ಹಾಲಿ ಅಧ್ಯಕ್ಷನಾಗಿರುವಾಗ ತರಾತು-ರಿಯಲ್ಲಿ ಬೇರೊಬ್ಬರನ್ನು ನೇಮಿಸಲು ಸಮಾಜದ ಮುಖಂಡರ ಸಭೆ ನಡೆಸಿದ್ದರಾ. ಸಮಾಜದ ಮುಖಂಡರ ಸಭೆ ನಡೆಸದೇ ಏಕಾಏಕಿ ತಾಲೂಕಾಧ್ಯಕ್ಷರನ್ನು ನೇಮಕ ಮಾಡಿದ್ದಾರೆ. ಬೇರೊಬ್ಬರನ್ನು ತಾಲೂಕಾಧ್ಯಕ್ಷರಾಗಿ ಮಾಡಿರುವುದರಿಂದ ಸಮಾಜವನ್ನು ಹೊಕ್ಕಲೆಬ್ಬಿಸುವ ಕೆಲಸ ಮಾಡುತ್ತಿದ್ದಾರೆಂದು ಆರೋಪಿಸಿದರು. 2-3 ದಿನದಲ್ಲಿ ಸಮಾಜದ ಮುಖಂಡರ ಸಭೆ ಕರೆದು ಸಭೆಯಲ್ಲಿ ನನ್ನ ತಪ್ಪುಗಳಿದ್ದರೇ ಎಲ್ಲಾರ ಸಮಕ್ಷಮದಲ್ಲಿ ಮನವರಿಕೆ ಮಾಡಿಕೊಡಬೇಕು. ಒಂದು ವೇಳೆ ನನ್ನ ತಪ್ಪುಗಳಿದ್ದರೇ ಕೂಡಲೇ ಸಮಾಜದ ಮುಖಂಡರಲ್ಲಿ ಕ್ಷೇಮೆಯಾಚಿಸಿ ತಾಲೂಕಾಧ್ಯಕ್ಷ ಸ್ಥಾನಕ್ಕೆ ರಾಜಿನಾಮೆ ನೀಡುತ್ತೇನೆಂದು ಹೇಳಿದರು. ಈ ಸಂದರ್ಭದಲ್ಲಿ ಮೌನೇಶ ನಗನೂರು, ಅಯ್ಯಪ್ಪ ನಾಯಕ, ಮಸ್ಕಿ, ಸಿದ್ದು ನಾಯಕ ಮದಿಕಿನಾಳ, ಜಮದಗ್ನಿ ಹಾಲಾಪೂರ, ನಾಗರಾಜ ಪರಾಪೂರು ಸೇರಿದಂತೆ ಇನ್ನಿತರಿದ್ದರು.

## ಹುಟ್ಟು ಹಬ್ಬದ ಪ್ರಯುಕ್ತ ರೋಗಿಗಳಿಗೆ ಹಣ್ಣು ಬ್ರೆಡ್ ವಿತರಣೆ

**ನೈಜ್ಯ ದೆಸೆ ನ್ಯೂಸ್**

ಅರಕೇರಾ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರು ಹಿರಿಯ ಹೋರಾಟಗಾರರಾದ ಟಿ.ಎ. ನಾರಾಯಣಗೌಡರ 60ನೇ ಹುಟ್ಟು ಹಬ್ಬದ ಪ್ರಯುಕ್ತ



ರೋಗಿಗಳಿಗೆ ಹಣ್ಣು-ಹಂಪಲು ಬ್ರೆಡ್ ಹಾಲು ವಿತರಣೆ ಮಾಡುವ ಮೂಲಕ ಹುಟ್ಟು ಹಬ್ಬವನ್ನು ಅರಕೇರಾ ತಾಲೂಕು ಘಟಕದಿಂದ ಆಚರಣೆ ಮಾಡಲಾಯಿತು ಈ ಸಂದರ್ಭದಲ್ಲಿ ಅರಕೇರಾ ತಾಲೂಕ ಅಧ್ಯಕ್ಷ ರಂಗಪ್ಪ ಗಾಲಿ ಸೇರಿದಂತೆ ಪದಾಧಿಕಾರಿಗಳು ನಗರ ಘಟಕದ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಸದಸ್ಯರು ಕಾರ್ಯಕರ್ತರು ಭಾಗವಹಿಸಿದ್ದರು.

# ರಾಯಚೂರ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆಯಿಂದ ಖೇತ್ ಬಚಾವೋ ಅಭಿಯಾನ



**ನೈಜ್ಯ ದೆಸೆ ನ್ಯೂಸ್**

ಮಾನ್ವಿ: ರಾಯಚೂರು ಕೃಷಿ ವಿಜ್ಞಾನ ಕೇಂದ್ರ ಮತ್ತು ಕಲ್ಲೂರು ಹಾಗೂ ಕುರ್ಡಿ ರೈತ ಸಂಪರ್ಕ ಕೇಂದ್ರದ ವತಿಯಿಂದ ನಡೆದ ಖೇತ್ ಬಚಾವೋ ಅಭಿಯಾನಕ್ಕೆ ರಾಯಚೂರ ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಹಾಗೂ ಬೇಸಾಯಶಾಸ್ತ್ರ ವಿಜ್ಞಾನಿ ಡಾ.ಮಲ್ಲರೆಡ್ಡಿ ಚಾಲನೆ ನೀಡಿ ಮಾತನಾಡಿ ಮಣ್ಣು ಆರೋಗ್ಯವಾಗಿದ್ದಾಗ ಮಾತ್ರ .

ಬೆಳೆ ಉತ್ಪಾದಕತೆ ಹೆಚ್ಚಿಸುವುದಕ್ಕೆ ಸಾಧ್ಯ ಸಸ್ಯಗಳ ಬೆಳೆವಣಿಗೆಗೆ 17 ಪೋಷಕಾಂಶಗಳು ಅಗತ್ಯವಿರುತ್ತದೆ ಆದ್ದರೆ ರೈತರು ಕೇವಲ ಅಗತ್ಯ ಪೋಷಕಾಂಶಗಳನ್ನು ಹೆಚ್ಚಾಗಿ ರಾಸಾಯನಿಕ ಗೊಬ್ಬರ ಮೂಲಕ ನೀಡುವುದರಿಂದ ಬೆಳೆಗೆ ಸಮಗ್ರಪೋಷಕಾಂಶಗಳು ದೊರೆಯದೆ ಉತ್ಪಾದಕತೆ ಕಡಿಮೆಯಾಗುವುದಲ್ಲದೆ ಮಣ್ಣಿನ ಭೌತಿಕ,ರಾಸಾಯನಿಕ ಮತ್ತು ಜೈವಿಕ ಗುಣಮಟ್ಟ ಇಳಿಮುಖವಾಗಿ. ಮಣ್ಣಿನ ಆರೋಗ್ಯ , ಫಲವತ್ತತೆ ಕೆಡುತ್ತದೆ.ಅದ್ದ-ರಿಂದ ರೈತರು ಸಮಗ್ರ ಪೋಷಕಾಂಶಗಳ ನಿರ್ವಹಣೆಗೆ ಭೂಮಿಗೆ ತಿಪ್ಪೆ ಗೊಬ್ಬರ, ಹಸಿರೆಲೆ ಗೊಬ್ಬರಗಳು, ದ್ರವಯುಕ್ತ ಸಾವಯುವ ಗೊಬ್ಬರಗಳಾದ ಜೀವಾಮೃತ,ಪಂಚಗವ್ಯ,-ಎರೆಜಲ, ರೈಜೋಬಿಯಂ, ರಂಜಕ ಕರಗಿಸುವ ಸೂಕ್ಷ್ಮ ?ಮಣು ಜೀವಿಗಳಿಂದ ತಯಾರಿಸಿದ ಜೈವಿಕ ಗೊಬ್ಬರಗಳು, ಬೆಳೆ ಪರಿವರ್ತನೆ ಮತ್ತು ಕೃಷಿ ತ್ಯಾಜ್ಯ ವಸ್ತುಗಳನ್ನು ಭೂಮಿಗೆ ಸೇ-ರಿಸುವುದರಿಂದ ಬೆಳೆಗೆ ಸಮಗ್ರ ಪೋಷಕಾಂಶಗಳು ದೊರೆಯುತ್ತವೆ ಎಂದು ತಿಳಿಸಿದರು.

ರೈತ ಸಂಪರ್ಕ ಕೇಂದ್ರ ಕುರ್ಡಿ ಹಾಗೂ ಕಲ್ಲೂರಿನ ಕೃಷಿ ಅಧಿಕಾರಿಗಳಾದ ಭೀಮರಾಯ ಪಡದಳ್ಳಿ ರೈತರಿಗೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ ಹಾಗೂ ಕೃಷಿ ಇಲಾಖೆಯ ಇತರ ಸೌಲಭ್ಯಗಳ ಬಗ್ಗೆ ವಿವಾರವಾದ ಮಾಹಿತಿಯನ್ನು ನೀಡಿದರು. ರೈತರಿಗೆ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಿದರು ಹಾಗೂ ಬೀಜೋಪಚಾರದ ಪ್ರಾತ್ಯಕ್ಷಿಕೆಯನ್ನು ತೋರಿಸಿದರು. ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಯಲ್ಲಪ್ಪ, ರೈತ ಸಂಪರ್ಕ ಕೇಂದ್ರ ಕಲ್ಲೂರು ಲೆಕ್ಕ ಸಹಾಯಕ ಅಮರೇಶ ಮಾಡಗಿರಿ, ಹಾಗೂ ವಿವಿಧ ಗ್ರಾಮಗಳ ನೂರಾರು ರೈತರು ಭಾಗವಹಿಸಿದರು. ರಾಯಚೂರು ಕೃಷಿ ವಿಜ್ಞಾನ ಕೇಂದ್ರ ಮತ್ತು ಕಲ್ಲೂರು ಹಾಗೂ ಕುರ್ಡಿ ರೈತ ಸಂಪರ್ಕ ಕೇಂದ್ರದ ವತಿಯಿಂದ ನಡೆದ ಖೇತ್ ಬಚಾವೋ ಅಭಿಯಾನದಲ್ಲಿ ಕೃಷಿ ವಿಜ್ಞಾನಿ ಡಾ.ಮಲ್ಲರೆಡ್ಡಿ ರೈತರಿಗೆ ಮಾಹಿತಿ ನೀಡಿದರು.

## ಮಹಾ ಚೇತನ ಪ್ರೊ.ಬಿ.ಕೃಷ್ಣಪ್ಪ ಜನ್ಮ ದಿನಾಚರಣೆ

**ನೈಜ್ಯ ದೆಸೆ ನ್ಯೂಸ್**

ಮಸ್ಕಿ: ದೀನ-ದಲಿತರು ಮತ್ತು ಭೂ ರಹಿತರಿಗೆ ಭೂಮಿಯ ಹಕ್ಕು ಸಿಗಬೇಕೆಂದು,ಸಾರಾಯಿ ಅಂಗಡಿ ಬೇಡ ಹೋಬಳಿಗೊಂದು ವಸತಿ ಶಾಲೆ ಬೇಕೆಂದು ರಾಜ್ಯಾದ್ಯಂತ ಬೃಹತ್ ರ?ಯಾಲಿಗಳನ್ನು,ಭೂಹೋರಾಟಗಳನ್ನು ಕೈಗೊಂಡವರು ಪ್ರೊ.ಬಿ.ಕೃಷ್ಣಪ್ಪ ನವರು ಎಂದು ಮಸ್ಕಿ ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಮೌನೇಶ ಮುರಾರಿ ತಿಳಿಸಿದರು.



ಪಟ್ಟಣದ ಗಾಂಧಿನಗರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನವನದಲ್ಲಿ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕರಾದ ಪ್ರೊ.ಬಿ.ಕೃಷ್ಣಪ್ಪ ಅವರ 88ನೇ ಜನ್ಮದಿನದ ಗೌರವಪೂರ್ವಕವಾಗಿ ಅಂಬೇಡ್ಕರ್ ಪ್ರತಿಮೆಗೆ ಹಾಗೂ ಪ್ರೊ.ಬಿ.ಕೃಷ್ಣಪ್ಪ ಅವರ ಭಾವಚಿತ್ರಕ್ಕೆ ಹಲವಾರು ಹಿರಿಯ ಮುಖಂಡರು ಹಾಗೂ ಹೋರಾಟಗಾರರ ನೇತೃತ್ವದಲ್ಲಿ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಮಾತನಾಡಿದರು. ಅದೇ ರೀತಿ ಹಿರಿಯ ದಲಿತ ಸಾಹಿತಿ ಸಿ.ದಾನಪ್ಪ ನಿಲೋಗಲ್ ಅವರು ಮಾತನಾಡಿ,ಕೃಷ್ಣಪ್ಪ ನವರ ಹೋರಾಟದ ಬದುಕು ಇಂದಿನ ಯುವಜನತೆಗೆ ಮಾದರಿಯಾಗಿದೆ ಹಾಗೂ ಮಕ್ಕಳು ಹಾಗೂ ಯುವಕರಿಗೆ ಸಾಮಾಜಿ-ಕ ಜಾಗೃತಿ,ಶಿಕ್ಷಣ ಮತ್ತು ಸಮಾನತೆಯ ಮಹತ್ವದ ಕುರಿತು ಅರಿವು ಮೂಡಿಸಿದ ಮಹಾನ್ ನಾಯಕ ಎಂದು ತಿಳಿಸಿದರು. ತದನಂತರ ದೊಡ್ಡಪ್ಪ ಮುರಾರಿ ಮಾತನಾಡಿ ಸಮಾಜದಲ್ಲಿದ್ದ ಜಾತಿಯತೆ,ಅಸ್ಪೃಶ್ಯತೆ ಹಾಗೂ ದೇವದಾಸಿ ಪದ್ಧತಿಯಂತಹ ಅನಿಷ್ಟ ಆಚರಣೆಗಳ ವಿರುದ್ಧ ತೀವ್ರವಾಗಿ ಹೋರಾಡಿದ ಮಹಾನ್ ರಾಷ್ಟ್ರ ನಾಯಕ ಕೃಷ್ಣಪ್ಪ ನವರು ಎಂದು ಅಭಿಪ್ರಾಯಪಟ್ಟರು. ಈ ವೇಳೆ ಪುರಸಭೆ ಸದಸ್ಯರಾದ ದೊಡ್ಡ ಕರಿಯಪ್ಪ ಮುರಾ-ರಿ,ದುರ್ಗಾಪ್ರಸಾದ್ ತೋರಣದಿನ್ನಿ,ಪ್ರಶಾಂತ ಮುರಾ-ರಿ,ಕಾಶಿಮಪ್ಪ ಡಿ ಮುರಾರಿ,ಬಾಲಸ್ವಾಮಿ ಜಿನ್ನಾಪೂರ,ಮರಿಸ್ವಾಮಿ ಬೆನಕನಾಳ,ಯಮನಪ್ಪ ಚಲುವಾದಿ,ಸದ್ದಾಂ ಮಸ್ಕಿ ಸೇರಿದಂತೆ ಹಲವಾರು ಪ್ರೊ.ಬಿ.ಕೃಷ್ಣಪ್ಪನವರ ಅಭಿಮಾನಿಗಳು,ಮುಖಂಡರು, ಕಾರ್ಯಕರ್ತರು ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು.

# ಹೆಚ್‌ಪಿಇ ಲಸಿಕೆ ಪಡೆದ 50 ವಿದ್ಯಾರ್ಥಿನಿಯರು

### ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ಭವಿಷ್ಯದಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗೆ ಲಸಿಕೆ ಹಾಕಿಸಿ

**ನೈಜ್ಯ ದೆಸೆ ನ್ಯೂಸ್**

ರಾಯಚೂರು: ನಮಗೆ ಕಂಡುಬರುವ ಖಾಯಿಲೆಗಳಿಗೆ ರೋಗ ಯಾವುದು ಹಾಗೂ ಅದಕ್ಕೆ ಯಾವ ಚಿಕಿತ್ಸೆ ನೀಡಬೇಕು ಎಂದು ನಿರ್ಧರಿಸುವವರು ವೈದ್ಯರೆ ಹೊರತು, ಸಾಮಾಜಿಕ ಜಾಲತಾಣಗಳಲ್ಲಿ ತಾವೇ ವೈದ್ಯರಂತೆ ಬಿಂಬಿಸಿಕೊಂಡು ತಪ್ಪು ಮಾಹಿತಿ ನೀಡುವವರಲ್ಲ, ಈ ದಿಶೆಯಲ್ಲಿ ಭವಿಷ್ಯದಲ್ಲಿ ಹೆಣ್ಣು ಮಕ್ಕಳನ್ನು ಗರ್ಭಕಂಠದ ಕ್ಯಾನ್ಸರ್‌ನಿಂದ ಮುಕ್ತಗೊಳಿಸಲು ನೆಮ್ಮದಿಯ ಜೀವನ ನಡೆಸಲು ಪ್ರಸ್ತುತ 14 ವರ್ಷದ ಹೆಣ್ಣು ಮಕ್ಕಳಿಗೆ ಹಾಕಲಾಗುವ ಹೆಚ್.ಪಿ.ವಿ ಲಸಿಕೆಯನ್ನು ಪಾಲಕರು ಯಾವುದೆ ಹಿಂದೇಟು ಹಾಕದೆ ನಿಮ್ಮ ಮಗಳ ಸುರಕ್ಷತೆಗಾಗಿ ಉಚಿತವಾಗಿ ಹಾಕಿಸಿ ಎಂದು ಜಹೀರಾಬಾದ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ ಶ್ವೇತಾಂಬರಿ ತಿಳಿಸಿದರು.

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಜಹೀರಾಬಾದ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಸಿಕೆ



ಪಡೆಯಲು ಆಗಮಿಸಿದ ವಿದ್ಯಾರ್ಥಿನಿಯರ, ತಂದೆ- ತಾಯಂದಿರಿಗೆ ಜಾಗೃತಿ ನೀಡಿ ಮಾತನಾಡುತ್ತಾ, ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು, ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ವೈದ್ಯರಲ್ಲದವರು ಹರಡಿಸುವ ತಪ್ಪು ಮಾಹಿತಿ ನಂಬದೆ, ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆ ತಪ್ಪದೆ ಹಾಕಿಸಿ. ಅಲ್ಲದೆ ಪೋಷಕರು ತಮ್ಮ ಇದಕ್ಕಾಗಿ ತಮ್ಮ ಮಗಳನ್ನು ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಉಚಿತವಾಗಿ ಲಸಿಕೆ ಹಾಕಿಸಲು ಕೋರಿದರು.

ಗರ್ಭಕಂಠದ ಕ್ಯಾನ್ಸರ್ ಉಂಟಾಗುವ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ,



ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಶುಶ್ರೂಷಣಾಧಿಕಾರಿ ಸುವರ್ಣ, ಔಷಧಾಧಿಕಾರಿ ಶಬನಮ್, ಪ್ರಯೋಗಾಲಯ ತಂತ್ರಜ್ಞ ಅತ್ತಾಉಲ್ಲಾ, ಆಶಾ ಕಾರ್ಯಕರ್ತೆ ಶಾರದಾ, ಸೇ-ರಿದಂತೆ ತಾಯಂದಿರು ಪಾಲಕರು ಉಪಸ್ಥಿತರಿದ್ದರು.

## ಕರವೇ ರಾಜ್ಯಧ್ಯಕ್ಷ ನಾರಾಯಣಗೌಡ ಜನ್ಮದಿನದ ಅಂಗವಾಗಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಣೆ

**ನೈಜ್ಯ ದೆಸೆ ನ್ಯೂಸ್**

ಬಳ್ಳಾರಿ / ಕಂಪ್ಲಿ : ತಾಲೂಕಿನ ನಂ.10 ಮುದ್ದಾಪುರ ಗ್ರಾಮದ ಯಲ್ಲಮ್ಮಕ್ಯಾಂಪ್ ಬಳಿಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕರವೇ(ನಾರಾಯಣಗೌಡ ಬಣ) ತಾಲೂಕು ಘಟಕ ಅಧ್ಯಕ್ಷ ಬಳೆ ಮಲ್ಲಿಕಾರ್ಜುನ ನೇತೃತ್ವದಲ್ಲಿ ಬುಧವಾರ ಶಾಲಾ ಮಕ್ಕಳಿಗೆ ಉಚಿತ ನೋಟ್ ಬುಕ್, ಪೆನ್ನು, ಪೆನ್ಸಿಲ್ ವಿತರಿಸಿದರು. ನಂತರ ತಾಲೂಕಾಧ್ಯಕ್ಷ ಬಳೆ ಮಲ್ಲಿಕಾರ್ಜುನ ಮಾತನಾಡಿ, ಇಡೀ ರಾಜ್ಯಾದ್ಯಂತ ನಾರಾಯಣಗೌಡ ಅವರ ಜನ್ಮದಿನಾಚರಣೆ ಮಾಡಲಾಗುತ್ತಿದೆ.

ಪ್ರತಿಯೊಂದು ಹಂತದಲ್ಲಿ ಹೋರಾಟದ ಮೂಲಕ ಜನತೆಗೆ ನ್ಯಾಯ ಒದಗಿಸಿಕೊಡುವಲ್ಲಿ ನಾರಾಯಣಗೌಡರ ಶ್ರಮ ಅಪಾರ. ಅವರ ಮಾರ್ಗದರ್ಶನದಲ್ಲಿ ಜನಸೇವೆ



ಮಾಡಿಕೊಂಡು ಬರಲಾಗುತ್ತಿದೆ ಎಂದರು ಪ್ರಧಾನ ಕಾರ್ಯದರ್ಶಿ ಮನೋಜ್ ಗೌಡ ಮಾತನಾಡಿ, ಉತ್ತಮ ವ್ಯಕ್ತಿಗಳನ್ನಾಗಿ ರೂಪಿಸುವ ನಿಟ್ಟಿನಲ್ಲಿ ನೋಟ್ ಬುಕ್, ಪೆನ್ನು ಮಕ್ಕಳಿಗೆ ಅತ್ಯವಶ್ಯಕವಾಗಿದೆ. ಕರವೇಯಿಂದ ನಿರಂತರ ಹೋರಾಟ ನಡೆಯುತ್ತಿದೆ. ಶಿಕ್ಷಣವೆಂಬುದು ಹುಲಿ ಹಾಲಿನಂತೆ, ಅದನ್ನು ಕುಡಿದವರು ಮಾತ್ರ ಘರ್ಜಿಸುತ್ತಾರೆ ಎಂದರು. ಒಟ್ಟು 40 ಮಕ್ಕಳಿಗೆ ಉಚಿತವಾಗಿ ನೋಟ್ ಬುಕ್ ಮತ್ತು ಪೆನ್ನು, ಪೆನ್ಸಿಸ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯಶಿಕ್ಷಕಿ ಉಷಾರಾಣಿ ಬಾವಿ, ಸಹ ಶಿಕ್ಷಕಿ ಶೇಖಮ್ಮ, ಕರವೇ ತಾಲೂಕು ಉಪಾಧ್ಯಕ್ಷರಾದ ವಿ.ಬಿ.ನಾಗರಾಜ, ಅಕ್ಕಿ ಜಿಲಾನ್, ನಗರ ಘಟಕ ಅಧ್ಯಕ್ಷ ಜಂಗ ನಾಗರಾಜ, ಗ್ರಾಮ ಘಟಕ ಅಧ್ಯಕ್ಷರಾದ ಜಿ.ರಮೇಶ, ಕೆ.ಶಶಿಧರ, ಪದಾಧಿಕಾ-ರಿಗಳಾದ ಪ್ರಕಾಶ್ ಶೇಟ್, ಹೆಚ್.ಲಿಂಗೇಶ, ಗಾರೆ ಸುದೀಪ್, ಅಂಬರೇಶ, ಜಿ.ಗಜೇಂದ್ರ, ರಾಮಚಂದ್ರ, ಶಾಲಾ ಅಡುಗೆದಾರರಾದ ಪ್ರೇಮ, ಶಿವಮ್ಮ ಸೇರಿದಂತೆ ಮಕ್ಕಳಿದ್ದರು.

# ಅತಿ ಹೆಚ್ಚು ಅವಧಿ ಪ್ರಧಾನಮಂತ್ರಿಗಳಾಗಿ ನರೇಂದ್ರ ಮೋದಿ ದಾಖಲೆ ಆದಿಶೇಷ ಗುಡಿಯಲ್ಲಿ ವಿಶೇಷ ಪೂಜೆ

**ನೈಜ್ಯ ದೆಸೆ ನ್ಯೂಸ್**

ಸಿಂಧನೂರು: ದೇಶದ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಜೂ.10ಕ್ಕೆ, ಭಾರತದಲ್ಲಿ ಅತಿ ಹೆಚ್ಚು ದಿನಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಮಂತ್ರಿ ಎಂಬ ದಾಖಲೆ ಬರೆದಿದ್ದಾರೆ ಎಂದು ಬಿಜೆಪಿ ಮುಖಂಡ ಹಾಗೂ ನಗರ ಮಂಡಲದ ಅಧ್ಯಕ್ಷ ಸಿದ್ರಾಮೇಶ ಮನ್ನಾಪೂರು ಹೇಳಿದರು.

ನಗರದ ಆದಿಶೇಷನ ದೇವಸ್ಥಾನದಲ್ಲಿ ಬಿಜೆಪಿ ನಗರ ಮಂಡಲದ ವತಿಯಿಂದ ವಿಶೇಷ ಪೂಜೆ ಮತ್ತು ಮಂಗಳಾರತಿ ಮಾಡುವುದರ ಮೂಲಕ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ಅಭಿನಂದನೆ ಸಲ್ಲಿಸಿ, ನಂತರ ತಮ್ಮ ಬಿಜೆಪಿ ಕಚೇರಿಯಲ್ಲಿ ಮಾತನಾಡಿದರು. ಪ್ರದಾನ ಮಂತ್ರಿ ನರೇಂದ್ರ ಮೋದಿಯವರು 26 ಮೇ 2014ರಂದು ಮೊದಲ ಬಾರಿಗೆ ಪ್ರಮಾಣ



ವಚನ ಸ್ವೀಕರಿಸಿದ ದಿನದಿಂದ ಇಲ್ಲಿತನಕ 4,399 ದಿನಗಳನ್ನು ಪೂರೈಸಿ ಜವರಲಾಲ್ ನೆಹರು ಅವರ 4,398 ದಿನಗಳ ಅವಧಿಯ ದಾಖಲೆಯನ್ನು ಮೀ-ರಿಸಿರುವುದು ನಮಗೆಲ್ಲ ಹೆಮ್ಮೆ ತರುವ ವಿಷಯವಾಗಿದೆ.

12 ವರ್ಷಗಳ ಸೇವೆ ಇದು 2014 ರಿಂದ 2026ರ ವರೆಗಿನ ಸತತ ಮೂರು ಅವಧಿಗಳ ಆಡಳಿತ ನಡೆಸಿದ ಅವಧಿಯಲ್ಲಿ ಜನಕಲ್ಯಾಣ ಕೇಂದ್ರಿತ ಯೋಜನೆಗಳು ಇದರ ಅಡಿಯಲ್ಲಿ ಜನಧನ್, ಯೋಜನೆ ಸ್ವಚ್ಛ ಭಾರತ್ ಮಿಷನ್, ಪ್ರಧಾನಮಂತ್ರಿ ಅವಾಸ್ ಯೋಜನೆ, ಜಲಜೀವನ್ ಮಷಿನ್, ಆಯುಷ್ಮಾನ್ ಭಾರತ, ಬಡತನ ನಿವಾರಣೆಗಾಗಿ ಕಳೆದ 12 ವರ್ಷಗಳಿಂದ ಸುಮಾರು 25 ಕೋಟಿ ಜನರು ಬಡತನದಿಂದ ಹೊರ ಬಂದಿದ್ದಾರೆ. ಅಂತ್ಯೋದಯ ತತ್ವ ಈ ದೇಶದ ಬಡತನ ರೇಖೆಗಿಂತ ಹಿಂದೆ ಇರುವ ಕೊನೆಯ ವ್ಯಕ್ತಿಯ ಅಭಿವೃದ್ಧಿಯ ಫಲ ತಲುಪಿಸುವ ಉದ್ದೇಶವಾಗಿದೆ ಎಂದರು.

ಗ್ರಾಮೀಣ ಮಂಡಲದ ಅಧ್ಯಕ್ಷ ಯಂಕೋಬ ರಾಮತ್ನಾಳ್ ಮಾತನಾಡಿ, ಸ್ವಾತಂತ್ರ್ಯ ನಂತರ ಜನಿಸಿದ ಮೊದಲ ಪ್ರಧಾನಿ ರಾಜಕೀಯ ಅಂಶವಿಲ್ಲದೆ ಸಾಧಾರಣ ಹಿನ್ನೆಲೆಯಿಂದ ಬಂದು ದೇಶದ ಅತ್ಯುನ್ನತ ಉದಾಹರಣೆಯಾಗಿದೆ.ಮುಂದಿನ ದಿನಮಾನಗಳಲ್ಲಿ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ದೇಶದ ಹಾಗೂ ಜನರ ಸೇವೆಗಾಗಿ ಇನ್ನೂ ನೂರು ವರ್ಷಗಳ ಕಾಲ ಬಾಳಲಿ ಆ ದೇವರು ಅವರಿಗೆ ಆಯುಷ್ಯ ಆರೋಗ್ಯ ಐಶ್ವರ್ಯವನ್ನು ಕೊಟ್ಟು ಕಾಪಾಡಲೆಂದರು.

ಈ ಸಂದರ್ಭದಲ್ಲಿ: ಕೆ.ರಾಜಶೇಖರ, ಮಧ್ವರಾಜ ಆಚಾರ್ಯ, ನಿರುಪಾದೆಪ್ಪ ಜೋಳದರಾಶಿ, ಸಿರಾಜ ಪಾಷಾ, ಟಿ ಸುಬ್ಬರಾವ್, ಶೈಲಜಮ್ಮ ಷಡಕ್ಷರಪ್ಪ ನಾಗಲಪುರ, ರವಿ ರಾಠೋಡ್, ರವಿ ಉಪ್ಪಾರ, ಶರಣಬಸವ ದುಮತಿ, ಸೋಮನಾಥ ಪತ್ತಾರ್, ನಾಗರಾಜ ದೇವರಗುಡಿ, ಪ್ರಶಾಂತ ಶೆಟ್ಟಿ, ಫಕೀರಪ್ಪ ಬಾಗೋಡಿ ತಿಡಿಗೋಳ, ಶಿವು ಹಿರೇಮಠ, ರಾಮಕೃಷ್ಣ ಉಪ್ಪಾರ, ಶರಣಪ್ಪ ಬಂಡಿ, ಹಸೇನಪ್ಪ ಸೂಲಂಗಿ, ಬಸವರಾಜ ನಾಯಕ, ಮುದಿಯಪ್ಪ ಕಟ್ಟಿಮನಿ, ಅಂಬರೀಶ ಕಡಬೂರು, ನಾಗರಾಜ ಕಡಬೂರು, ಮೌನೇಶ ಹೊಸಮನೆ, ಕಾಶಿನಾಥ ಹಿರೇಮಠ, ಶ್ರೀನಿವಾಸ್ ಮೇಸ್ತ್ರಿ, ಯಲ್ಲುಸಾ ಬದಿ, ಆನಂದಯ್ಯ ಕೊಂಡ, ಸಂಗಪ್ಪ ಬೊಮ್ಮನಾಳ, ರಾಮು, ಸಹನಾ ಹಿರೇಮಠ, ಮಮತಾ ಹಿರೇಮಠ, ಶಿವಮ್ಮ ಅಂಬಿಗರ, ರೇಣಮ್ಮ ನಾಯಕ, ಯಮನಮ್ಮ, ಸೇರಿದಂತೆ ಇನ್ನಿತರರು ಇದ್ದರು.

